ಅವಕಾಶವಿದ್ದು ಹಾಲಿ 6 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.

ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳು

200(302); ಶ್ರೀ ಮಲ್ಲಿಕಾರ್ಜುನ ಸಿದ್ದಾಮಪ್ಪ ಖೂಬಾ (ಬಸವಕಲ್ಯಾಣ)

ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಇರುವ ವಿವಿಧ ವರ್ಗದ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದ ಮುಂದಿರುವ ಕ್ರಮಗಳೇನು

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೈದರಾಬಾದ್–ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಇರುವ ವಿವಿಧ ವರ್ಗದ ವಿದ್ಯಾರ್ಥಿ ನಿಲಯಗಳು ಹಾಗೂ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ:

ಕ್ರ.ಸಂ.	ವಿವಿಧ ವರ್ಗಗಳು	ವಿದ್ಯಾರ್ಥಿ ನಿಲಯಗಳ ಸಂಖ್ಯೆ	ಇವುಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ
1	ಸಮಾಜ ಕಲ್ಯಾಣ ಇಲಾಖೆ	386	31486
2	ಪರಿಶಿಷ್ಟ ಪಂಗಡಗಳ ಕಲ್ಯಾಣ ನಿರ್ದೇಶನಾಲಯ	67	4261
3	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ	455	31707

ಆ) ಹೌದು

ಇ) 2013–14ನೇ ಸಾಲಿನ ರಾಜ್ಯ ವಲಯ ಅನುದಾನದಲ್ಲಿ ಸಮಾಜ ಕಲ್ಯಾಣ ಇಲಾಖೆಯ 7768 ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಹಾಸಿಗೆ, ಹೊದಿಕೆಗಳನ್ನು (ಜಮಖಾನ, ಬೆಡ್‌ಶೀಟ್, ಬೆಡ್‌ಸ್ಪ್ರೆಡ್ ಮತ್ತು ಪಿಲ್ಲೊ) ಸರಬರಾಜು ಮಾಡಲಾಗಿದೆ. 10120 ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಹಾಸಿಗೆ, ಹೊದಿಕೆ ಸಾಮಗ್ರಿಗಳನ್ನು ಸರಬರಾಜು ಮಾಡಲು ಕ್ರಮಕೈಗೊಳ್ಳಲಾಗಿದೆ ಮತ್ತು ಸ್ಟೀಲ್ ಕಾಟ್‌ಗಳನ್ನು ಹೊಂದಿರುವ ಕಡೆಗಳಲ್ಲಿ 6072 ಕಾಯರ್ ಮ್ಯಾಟ್ರಸ್‌ಗಳನ್ನು ಸರಬರಾಜು ಮಾಡಲು ಕ್ರಮಕೈಗೊಳ್ಳಲಾಗಿದೆ. ಇದಲ್ಲದೇ 82 ಸರ್ಕಾರಿ ವಿದ್ಯಾರ್ಥಿ ನಿಲಯಗಳಲ್ಲಿ ` 1834.39 ಲಕ್ಷಗಳ ವೆಚ್ಚದಲ್ಲಿ 135 ಹೆಚ್ಚುವರಿ ವಾಸದ ಕೊಠಡಿಗಳು, 128 ಶೌಚಾಲಯಗಳು, 121 ಸ್ನಾನ ಗೃಹಗಳು, 08 ಹೆಚ್ಚುವರಿ ಕಟ್ಟಡಗಳ ನಿರ್ಮಾಣ ಹಾಗೂ ಇನ್ನಿತರೆ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗಿರುತ್ತದೆ. 2014–15ನೇ ಸಾಲಿಗೆ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಗಳನ್ನು ನಿರ್ಮಾಣ ಮಾಡಲು ಒಟ್ಟು 16 ನಿವೇಶನಗಳನ್ನು ಗುರುತಿಸಲಾಗಿದ್ದು, ಶೀಘ್ರವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 48 ವಿದ್ಯಾರ್ಥಿ ನಿಲಯಗಳಿಗೆ 2012–13 ಮತ್ತು 2013–14ನೇ ಸಾಲಿನಲ್ಲಿ ಸನ್‌ಫ್ಯಾಕ್ಟ್ ಜನರೇಟರ್‌ಗಳನ್ನು ಅಳವಡಿಸಲಾಗಿದೆ ಹಾಗೂ 2012–13ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳಿಗೆ ತಟ್ಟೆ–ಲೋಟ, ಅನಿಲ ಒಲೆ ಒದಗಿಸಲು ಹಾಗೂ ನೀರಿನ ಕೊರತೆ ಇರುವ ವಿದ್ಯಾರ್ಥಿ ನಿಲಯಗಳಿಗೆ ಕೊಳವೆ ಬಾವಿ ಪೈಪ್‌ಲೈನ್ ಮೂಲಕ ನೀರು ಸರಬರಾಜು ಮಾಡಲು ಮತ್ತು ಫ್ಲೋರೈಡ್ ಅಂಶ ಹೆಚ್ಚಿಗೆ ಇರುವ ವಿದ್ಯಾರ್ಥಿ ನಿಲಯಗಳಿಗೆ Reverse Osmosis ಉಪಕರಣಗಳನ್ನು ಅಳವಡಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ` 259.00 ಲಕ್ಷಗಳನ್ನು ವಿನಿಯೋಗಿಸಲಾಗಿದೆ.